ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 09ನೇ ಮಾರ್ಚ್, 2020

ಲೆಕ್ಕಾಧೀಕ್ಷಕರ ಹುದ್ದೆಗೆ ಬಡ್ತಿ ನೀಡುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

382 (556) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಮತ್ತು ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ಎಸ್.ಎ.ಎಸ್. ಪರೀಕ್ಷೆ ಉತ್ತೀರ್ಣಗೊಂಡ ಪ್ರಥಮ ದರ್ಜೆ ಸಹಾಯಕ ಹುದ್ದೆಯಲ್ಲಿ 10 ವರ್ಷ ಸೇವೆ ಸಲ್ಲಿಸಿದ ನೌಕರರ ಜ್ಯೇಷ್ಠತಾ ಪಟ್ಟಿ ತಯಾರಿಸಲಾಗಿದೆಯೇ ; ಹಾಗಿದ್ದಲ್ಲಿ, ಈವರೆವಿಗೆ ಅವರುಗಳಿಗೆ ಲೆಕ್ಕಾಧೀಕ್ಷಕರ ಹುದ್ದೆಗೆ ಬಡ್ತಿ ನೀಡದಿರಲು ಕಾರಣವೇನು ; (ವಿವರ ನೀಡುವುದು)

(ಆ) ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಲೆಕ್ಕಾಧೀಕ್ಷಕರ ವಿವರವಾದ ಮಾಹಿತಿ ನೀಡುವುದು ; ಎಸ್.ಎ.ಡಿ ಇಲಾಖೆ ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆಯ ನೌಕರರ ಮಾಹಿತಿಯನ್ನು ಪ್ರತ್ಯೇಕವಾಗಿ ನೀಡುವುದು;

(ಇ) ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯಲ್ಲಿ ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಪೂರ್ಣ ಹುದ್ದೆವಾರು ಮಾಹಿತಿ ನೀಡುವುದು ?